# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1561 (1864)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ವಿಷಯ : ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಪ್ರಾಂಶುಪಾಲರ ಬಗ್ಗೆ

(ಅ) ರಾಜ್ಯಾದ್ಯಂತ 430 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿದ್ದು, ಪ್ರಸ್ತುತ ಚಿತ್ರದುರ್ಗದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಾತ್ರ ಪ್ರಾಂಶುಪಾಲರು ಕಾರ್ಯನಿರ್ವಹಿಸುತ್ತಿದ್ದು, ಉಳಿದ 429 ಕಾಲೇಜುಗಳಿಗೆ ಪ್ರಭಾರ ಪ್ರಾಂಶುಪಾಲರು ಕಳೆದ 12 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) 2017ರಲ್ಲಿ ಹೊಸದಾಗಿ ನೇಮಕಗೊಂಡ ಉಪನ್ಯಾಸಕರುಗಳು ತಮ್ಮ ಪ್ರೊಬೇಷನರಿ ಅವಧಿ ಪೂರ್ಣಗೊಳಿಸಿದ್ದರೂ ಪ್ರಭಾರ ಪ್ರಾಂಶುಪಾಲರು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಳೆದ ಒಂದು ದಶಕದಿಂದ ಪದವಿ ಕಾಲೇಜುಗಳ ಅಧ್ಯಾಪಕರುಗಳನ್ನು ಪ್ರೊಫೆಸರ್, ಹುದ್ದೆಗೆ, ಸಹ ಪ್ರಾಧ್ಯಾಪಕರುಗಳಿಗೆ ಪದೋನ್ನತಿ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಈ) 2007 ರಲ್ಲಿ 80 ಪದವಿ ಕಾಲೇಜುಗಳಿಗೆ ಅನುಮೋದನೆ ನೀಡಲಾಗಿದ್ದು, ಪ್ರಸ್ತುತ ಇಲ್ಲಿಯವರೆಗೂ ಇವುಗಳಿಗೆ ಮೂಲಸೌಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?